# ಕರಾವಳಿ ತರಂಗಿಣಿ

ಕಡಲ ಕಿನಾರೆಯಿಂದ ಕೆಂಪು ಕೋಟೆಯವರೆಗೆ..

ಕನ್ನಡ ವಾರಪತ್ರಿಕೆ


**ಸುಭಾಷಿತ:**

ಮನಸ್ಸು ನಿನ್ನನ್ನು ನಿಯಂತ್ರಿಸುವ ಮೊದಲು
ಮನಸ್ಸನ್ನು ನೀನು ನಿಯಂತ್ರಣದಲ್ಲಿಟ್ಟುಕೊಳ್ಳು..
ಸೂರ್ಯ ಚಂದ್ರರಂತೆ ಜಗತ್ತಿಗೆ ನೀನು
ಬೆಳಕಾಗುವುದು ಬೇಡ. ನಿನ್ನ ಬದುಕಿಗೆ ನೀನು
ಬೆಳಕಾಗು ಸಾಕು.. ಆಗ ನಿನ್ನ ಬದುಕು ಧನ್ಯ..
ಒಂಟಿಯಾದೆ ಎಂದು ಕೊರಗಬೇಡ
ನೀನು ಬರುವಾಗಲು ಒಂಟಿ. ಹೋಗುವಾಗಲು
ಒಂಟಿ.. ನೀನು ಒಂಟಿಯಾದಾಗಲೇ ನಿನ್ನ
ಸಾಮರ್ಥ್ಯ ತೋರಿಸುವ ಸಮಯ ಬರುವುದು..
**ಭಗವಾನ್ ಶ್ರೀಕೃಷ್ಣ**




PRGI No: KNKAN/25/A2498 www.karavalitharangini.com KARAVALI THARANGINI KANNADA Weekly Dakshina Kannada ದಿನಾಂಕ: 26-09-2025 to 02-10-2025 ಬೆಲೆ:10-00 ಸಂಪುಟ–1 ಸಂಚಿಕೆ–2 ಪುಟಗಳು–6



ಕ್ಷಣ ಕ್ಷಣದ ಸುದ್ದಿಗಳಿಗಾಗಿ
ಕರಾವಳಿ ತರಂಗಿಣಿ
ಪತ್ರಿಕಾ ಬಳಗದಿಂದ
ಅಂತರ್ಜಾಲ ಮಾಧ್ಯಮ
www.karavalitharangini.com
ಕರಾವಳಿ ತರಂಗಿಣಿ
ಮಂಗಳೂರು





ಕಾಲವೊಂದಿತ್ತು ದೇವರ ಬಲಿ ನಡೆಯುತ್ತಿದ್ದರೆ ಭಕ್ತರು ಕರ ಮುಗಿದು ಭಕ್ತಿಯಿಂದ ನಿಂತರೆ ಮನಸು ಪಾವನವಾಗುತ್ತಿತ್ತು. ಆದರೆ ಇಂದಿನ ಆಧುನಿಕ ಯುಗದಲ್ಲಿ ದೇವರು ಎದುರು ಬಂದು ನಿಂತರೂ ಅಂತಹ ಭಕ್ತಿಯಿಂದ ಪಾವನರಾಗಲು ಸಾಧ್ಯವಿಲ್ಲ. ಅದಕ್ಕೆ ಕಾರಣ ಯುವ ಪೀಳಿಗೆಯಿಂದ ಹಿಡಿದು ವೃದ್ದರವರೆಗೂ ಆವರಿಸಿರುವ ಸಾಮಾಜಿಕ ಜಾಲತಾಣಗಳ ಅಮಲು ಎಂದರೆ ತಪ್ಪಾಗಲಾರದು. ಇದಕ್ಕೆ ಉದಾಹರಣೆಯೇ ಇಂದಿನ ಈ ಚಿತ್ರ.

## ಇದು ನನ್ನ ಜೀವನದ ಗೌರವಯುತ ಘಳಿಗೆ – ಬಾನು ಮುಸ್ತಾಕ್



ಮೈಸೂರು: ನನ್ನ ಆಪ್ತ ಗೆಳತಿ ನನ್ನನ್ನು ದಸರಾ ಉದ್ಘಾಟನೆ ವೇಳೆ ಚಾಮುಂಡಿ ದರ್ಶನಕ್ಕೆ ಕರೆದೊಯ್ಯುವ ಹರಕೆ ಹೊತ್ತಿದ್ದಳು. ನನಗೆ ಹೋಗಲಿಕ್ಕೆ ಕಾರಣಾಂತರಗಳಿಂದ ಸಾಧ್ಯವಾಗಲಿಲ್ಲ. ಈ ವಿಳ್ಯದಲ್ಲಿ ಬೇಕಾದಷ್ಟು ಏರುಪೇರು, ಚಾರಿತ್ರಿಕ ಸನ್ನಿವೇಶ ಎದುರಾದರು ಸಹ ಚಾಮುಂಡಿ ತಾಯಿ ನನ್ನನ್ನು ಕರೆಸಿಕೊಂಡಿದ್ದಾಳೆ. ಆಕೆಯ ಸನ್ನಿಧಿಯಿಂದ ನಿಮ್ಮೆಲ್ಲರ ಎದುರು ನಿಂತಿದ್ದೇನೆ. ಇದು ನನ್ನ ಜೀವನದ ಅತ್ಯಂತ ಗೌರವಯುತವಾದ ಘಳಿಗೆ ಎಂದು ದಸರಾ ಉದ್ಘಾಟನೆ ವೇಳೆ ಬಾನು ಮುಸ್ತಾಕ್ ಭಾವುಕವಾಗಿ ಹೇಳಿದರು. ದಸರಾ ಅಂದರೆ ಕೇವಲ ಹಬ್ಬ ಮಾತ್ರವಲ್ಲ. ಇದು ಈ ನಾಡಿನ 3ನೇ ಪುಟಕ್ಕೆ...




## ಜಿಎಸ್‌ಟಿ ಇಳಿಕೆಯಿಂದ ಆರ್ಥಿಕ ಶಕ್ತಿ ವೃದ್ಧಿ–ಕ್ಯಾ. ಬ್ರಿಜೇಶ್ ಚೌಟ

ಮಂಗಳೂರು: ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸರಕಾರವು ಜಿಎಸ್‌ಟಿ ದರ ಇಳಿಕೆ ಮಾಡಿರುವುದರಿಂದ ದೇಶದ ಆರ್ಥಿಕ ಶಕ್ತಿ ವೃದ್ಧಿಸಲಿದೆ ಎಂದು ಸಂಸದ ಕ್ಯಾಪ್ಟನ್ ಬ್ರಿಜೇಶ್ ಚೌಟ ಹೇಳಿದರು. ದ.ಕ. ಜಿಲ್ಲಾ ಬಿಜೆಪಿ ಕಚೇರಿಯಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು ನವರಾತ್ರಿ ಸಂಭ್ರಮದ ವೇಳೆ ಜಿಎಸ್‌ಟಿ ಇಳಿಕೆಯ ಮೂಲಕ ಉಳಿತಾಯದ ಉತ್ಸವ ಸಾಕಾರವಾಗುತ್ತಿದೆ. ಜಿಎಸ್‌ಟಿ ಇಳಿಕೆಯ ಹಿನ್ನೆಲೆಯಲ್ಲಿ ಅ.20ರವರೆಗೆ ರಾಜ್ಯದ ಎಲ್ಲ ವಿಧಾನಸಭಾ ಕ್ಷೇತ್ರಗಳಲ್ಲಿ ವಿಶೇಷ ಅಭಿಯಾನ ಹಾಗೂ ನಾಗರಿಕರ ಜತೆ ಸಂವಾದ ನಡೆಸಲಾಗುವುದು ಎಂದರು. ಜಿಎಸ್‌ಟಿ ದರ ಇಳಿಕೆಯಿಂದ ವ್ಯಾಪಾರಿಗಳು, ಉದ್ದಿಮೆದಾರರು, ಗ್ರಾಹಕರಿಗೆ ಅನುಕೂಲವಾಗಲಿದೆ. ಬಿಜೆಪಿ ಆರ್ಥಿಕ ಪ್ರಕೋಷ್ಠದ ಜತೆಗೂಡಿ ಅಂಗಡಿ, ಮಾರುಕಟ್ಟೆಗಳಿಗೆ ತೆರಳಿ ಜನರ ಜತೆ ಸಂವಾದ, ಜಾಗೃತಿ ನಡೆಸಲಾಗುವುದು.




## ಭಾರತೀಯರ ತಲೆಗೆ ಟೋಪಿ ಹಾಕ್ತಿದಾರೆ: ಸಿ.ಎಂ


ಮೈಸೂರು: ಪ್ರಧಾನಿ ನರೇಂದ್ರ ಮೋದಿ ಬರೀ ಡೋಂಗಿ. GST ಜಾರಿ ಮಾಡಿದ್ದೂ ಮೋದಿ. GST ಹೆಚ್ಚೆಚ್ಚು ವಿಧಿಸಿದ್ದೂ ಮೋದಿಯವರೇ. ಈಗ ಬೆನ್ನು ತಟ್ಟಿಕೊಳ್ತಾ ಇರೋದೂ ಮೋದಿಯವರೇ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ವ್ಯಂಗ್ಯವಾಡಿದರು. ಮಹಾರಾಜ ಕಾಲೇಜು ಮೈದಾನದಲ್ಲಿ ದಸರಾ ಆಹಾರ ಮೇಳ ಉದ್ಘಾಟಿಸಿ ಮಾತನಾಡಿ, ಎಂಟು ವರ್ಷ ವಿಪರೀತ GST ವಸೂಲಿ ಮಾಡಿದ್ರಲ್ಲಾ ಪ್ರಧಾನಿ ಮೋದಿಯವರೇ ಅದೆಲ್ಲವನ್ನೂ ಭಾರತೀಯರಿಗೆ ವಾಪಾಸ್ ಕೊಡ್ತೀರಾ ಎಂದು ಪ್ರಶ್ನಿಸಿದರು. GST 18%, 28% ಹೆಚ್ಚಿಸಿದ್ದರ ಬಗ್ಗೆ ವಿರೋಧ ಮಾಡಿದವರು ನಾವು. ಇಷ್ಟು ವರ್ಷ ವಸೂಲಿ ಮಾಡಿದವರೇ ಈಗ ಕ್ರೆಡಿಟ್



ತಗೊತಾ ಇದಾರೆ. ಭಾರತೀಯರಿಗೆ ಎಷ್ಟು ನಾಜೂಕಾಗಿ ಟೋಪಿ ಹಾಕ್ತಾರೆ ನೋಡಿ. ಇದಕ್ಕೆಲ್ಲಾ ಮರಳಾಗಬಾರದು 3ನೇ ಪುಟಕ್ಕೆ...







# ಸುದ್ದಿ ತುಣುಕು

ಸಾಮಾಜಿಕ, ಶೈಕ್ಷಣಿಕ ಸಮೀಕ್ಷೆಗೆ ಸಂಬಂಧಿಸಿದಂತೆ ಉಂಟಾಗಿರುವ ಗೊಂದಲಗಳನ್ನು ಸರಿಪಡಿಸುವ ಸಂಬಂಧ ಅಧಿಕಾರಿಗಳ ಸಭೆ ಕರೆದಿದ್ದು, ಎಲ್ಲಾ ಸಮಸ್ಯೆಗಳನ್ನು ಸರಿಪಡಿಸುತ್ತೇನೆ ಎಂದು ಸಚಿವ ಶಿವರಾಜ್ ತಂಗಡಗಿ ತಿಳಿಸಿದರು.

ನಟ, ನಿರ್ದೇಶಕ ರಿಷಬ್ ಶೆಟ್ಟಿ ಅವರು ಪತ್ನಿ ಸಹಿತ ಕೊಲ್ಲೂರು ಮೂಕಾಂಬಿಕಾ ದೇವಸ್ಥಾನಕ್ಕೆ ಭೇಟಿಕೊಟ್ಟು ವಿಶೇಷ ಪೂಜೆ ಸಲ್ಲಿಸಿದರು.

ಅರೆಕಾಲಿಕ ಕಾನೂನು ಸ್ವಯಂ ಸೇವಕರ ಹುದ್ದೆಗೆ ರಾಜ್ಯ ಕಾನೂನು ಸೇವಾ ಪ್ರಾಧಿಕಾರ ಅರ್ಜಿ ಆಹ್ವಾನಿಸಿದ್ದು, ಆಸಕ್ತರು 2025ರ ಅಕ್ಟೋಬರ್ 20ರ ಅಂತ್ಯದ ವೇಳೆಗೆ ಅರ್ಜಿ ಸಲ್ಲಿಸಬಹುದಾಗಿದೆ.

ಹಲವು ಅಧಿಕಾರಿಗಳು ಅಧಿಕೃತ ವಿದೇಶ ಪ್ರವಾಸ ಕೈಗೊಂಡು ಅಧ್ಯಯನ ವರದಿಗಳನ್ನು ಸರ್ಕಾರಕ್ಕೆ ಸಲ್ಲಿಸಿಲ್ಲ. ಈ ಹಿನ್ನೆಲೆಯಲ್ಲಿ ಸರ್ಕಾರ ಕ್ರಮ ಕೈಗೊಂಡಿದೆ.

ಹಿರಿಯ ಸಾಹಿತಿ ಎಸ್.ಎಲ್. ಭೈರಪ್ಪ ಅವರು ನಮ್ಮನ್ನಗಲಿದ ಹೊತ್ತಲ್ಲಿ ದಸರಾ ಉದ್ಘಾಟಕಿ ಬಾನು ಮುಷ್ತಾಕ್ ಅವರು ತಮ್ಮ ಹಾಗೂ ಎಸ್.ಎಲ್. ಭೈರಪ್ಪ ನಡುವಿನ ಬಾಂಧವ್ಯವನ್ನು ಸಾಮಾಜಿಕ ಜಾಲತಾಣದಲ್ಲಿ ಬರೆದುಕೊಂಡಿದ್ದಾರೆ.

ಬೆಂಗಳೂರು ನಗರದ ಪ್ರಮುಖ ರಸ್ತೆಗಳಲ್ಲಿ ಕಾರ್ ಪೂಲಿಂಗ್ ಪರಿಚಯಿಸಲು ಚಿಂತನೆ ನಡೆಸಲಾಗಿದೆ ಎಂದು ಬಯೋಕಾನ್ ಕಂಪೆನಿ ಸಂಸ್ಥಾಪಕಿ ಕಿರಣ್ ಮಜುಂದಾರ್ ಶಾ ತಿಳಿಸಿದರು.

ಪ್ರಜ್ವಲ್ ರೇವಣ್ಣ ಅವರ ಮೇಲಿನ ಅತ್ಯಾಚಾರ ಆರೋಪ ಕುರಿತು ಪ್ರಕರಣಗಳನ್ನು ಬೇರೆ ಪೀಠಕ್ಕೆ ವರ್ಗಾಯಿಸಲು ಕೋರಿ ಸಲ್ಲಿಸಿದ್ದ ಅರ್ಜಿಗಳನ್ನು ಹೈಕೋರ್ಟ್ ವಜಾ ಗೊಳಿಸಿದೆ.

ಸಾಮಾಜಿಕ-ಶೈಕ್ಷಣಿಕ ಸಮೀಕ್ಷೆಯ ಹ್ಯಾಂಡ್ ಬುಕ್‌ನಲ್ಲಿ 1,561 ಜಾತಿಗಳ ಸೇರ್ಪಡೆಗೆ ಆಧಾರವೇನು? ಮನೆ ಮನೆಗೂ ಅಂಟಿಸಿರುವ ಸ್ಟಿಕ್ಕರ್‌ನ್ನು ತೆಗೆಯದಂತೆ ಏಕೆ ಸೂಚಿಸಲಾಗಿದೆ.

ಯಾವ ಕಾರಣಕ್ಕೆ ಆಧಾರ್ ಸಂಖ್ಯೆಯನ್ನು ನೋಂದಾಯಿಸಬೇಕು ಎಂದು ರಾಜ್ಯ ಹಿಂದುಳಿದ ವರ್ಗಗಳ ಆಯೋಗಕ್ಕೆ ಹೈಕೋರ್ಟ್ ಪ್ರಶ್ನಿಸಿದೆ.

ಯತ್ನಾಳ್ ಅವರನ್ನು ಮತ್ತೆ ಬಿಜೆಪಿಗೆ ಸೇರಿಸಿಕೊಳ್ಳಬೇಕು ಎಂದು ಮಾಜಿ ಸಂಸದ ರಮೇಶ್ ಕತ್ತಿ ಒತ್ತಾಯಿಸಿದರು.

ಕೂಡಲಸಂಗಮ ಪೀಠದಿಂದ ಬಸವ ಜಯ ಮೃತ್ಯುಂಜಯ ಸ್ವಾಮೀಜಿ ಅವರದ್ದು ಉಚ್ಚಾಟನೆಯೇ ಅಲ್ಲ, ಆ ಟ್ರಸ್ಟಿಗೂ ಕೂಡಲಸಂಗಮ ಪೀಠಕ್ಕೂ ಯಾವುದೇ ಸಂಬಂಧವಿಲ್ಲ ಎಂದು ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ತಿಳಿಸಿದರು.


ನಿಷೇಧಿತ ಆನ್‌ಲೈನ್ ಬೆಟ್ಟಿಂಗ್ ಆಪ್‌ಗಳನ್ನು ನಡೆಸುತ್ತಿರುವ ಜಾಲದ ವಿರುದ್ಧ ತೆಲಂಗಾಣ ಪೊಲೀಸರು ದಾಳಿ ಮುಂದುವರಿಸಿದ್ದು, ಮತ್ತೆ 8 ಮಂದಿಯನ್ನು ಬಂಧಿಸಿದ್ದಾರೆ.

ಗ್ರೇಟರ್ ನೋಯ್ಡಾದಲ್ಲಿ ಅಂತಾರಾಷ್ಟ್ರೀಯ ವ್ಯಾಪಾರ ಪ್ರದರ್ಶನದ ಪಾಲುದಾರಿಕೆಯನ್ನು ರಷ್ಯಾ ವಹಿಸಿರುವುದು ನಮ್ಮ ಸ್ನೇಹ ಮತ್ತಷ್ಟು ಗಟ್ಟಿಗೊಳ್ಳಲು ಕಾರಣವಾಗಲಿದೆ ಎಂದು ಮೋದಿ ತಿಳಿಸಿದ್ದಾರೆ.

ಜರ್ಮನಿಯರು ಸಂಪಾದಿಸುವುದಕ್ಕಿಂತ ಜರ್ಮನಿಯಲ್ಲಿ ಭಾರತೀಯರು ಹೆಚ್ಚು ಗಳಿಸುತ್ತಿದ್ದಾರೆ. ಇಲ್ಲಿನ ವಲಸೆ ನೀತಿ ತುಂಬಾ ಸರಳವಾಗಿದೆ ಎಂದು ಭಾರತದ ಜರ್ಮನ್ ರಾಯಭಾರಿ ತಿಳಿಸಿದ್ದಾರೆ.

ಗುವಾಹ್ಲಾ ಜಿಲ್ಲೆಯಲ್ಲಿ ನಕ್ಸಲರು ಮತ್ತು ಮಾವೋವಾದಿಗಳ ನಡುವೆ ಗುಂಡಿನ ಚಕಮಕಿ ನಡೆದಿದ್ದು, ನಿಷೇಧಿತ ಮಾವೋವಾದಿ ವಿಭಜಿತ ಗುಂಪಿನ ಕನಿಷ್ಠ ಮೂವರು ನಕ್ಸಲರು ಭದ್ರತಾ ಪಡೆಯ ಗುಂಡಿಗೆ ಬಲಿಯಾಗಿದ್ದಾರೆ ಎಂದು ಪೊಲೀಸರು ತಿಳಿಸಿದರು.

## ಪಾಲಕ್ ರೈಸ್



**ಬೇಕಾಗುವ ಪದಾರ್ಥಗಳು :**

ಅನ್ನ – 2 ಕಪ್, ಪಾಲಾಕ್ ಸೊಪ್ಪು-1 ಕಪ್ ಈರುಳ್ಳಿ-1, ಹಸಿ ಮೆಣಸಿನಕಾಯಿ-3-4, ಚಕ್ಕೆ-ಸ್ವಲ್ಪ, ಕಾಳುಮೆಣಸು-5, ಸಾಸಿವೆ-1 ಚಮಚ, ಜೀರಿಗೆ-1 ಚಮಚ, ಲವಂಗ-2 ಗೋಡಂಬಿ-10, ಉಪ್ಪು- ರುಚಿಗೆ ತಕ್ಕಷ್ಟು ಎಣ್ಣೆ 2-3 ಚಮಚ, ನಿಂಬೆಹಣ್ಣು-1

**ಮಾಡುವ ವಿಧಾನ :**

ಮೊದಲಿಗೆ ಬಾಣಲೆಯಲ್ಲಿ ಎಣ್ಣೆ ಹಾಕಿ ಕಾಯಿಸಿ ಅದಕ್ಕೆ ಸಾಸಿವೆ, ಜೀರಿಗೆ, ಮೆಣಸಿನ ಕಾಯಿ, ಕತ್ತರಿಸಿದ ಈರುಳ್ಳಿ ಹಾಕಿ ಕೆಲವು ನಿಮಿಷ ಹುರಿಯಬೇಕು. ನಂತರ ಕತ್ತರಿಸಿಕೊಂಡ ಪಾಲಾಕ್ ಸೊಪ್ಪನ್ನು ಹಾಕಿ ಹುರಿಯಬೇಕು. ಇದಕ್ಕೆ 1/2 ಕಪ್ ನೀರು ಹಾಕಿ ಕುದಿಯುವ ವರೆಗೂ ಸಣ್ಣ ಉರಿಯಲ್ಲಿಡಬೇಕು. ನಂತರ ಲವಂಗ, ಚಕ್ಕೆ, ಕರಿಮೆಣಸು ಮತ್ತು ಗೋಡಂಬಿಯನ್ನು ನುಣ್ಣಗೆ ರುಬ್ಬಿಕೊಂಡು ಬಾಣಲೆಯಲ್ಲಿ ಎಣ್ಣೆಗೆ ಹಾಕಿ ಹುರಿಯಬೇಕು. ನಂತರ ಪಾಲಕ್ ಮಿಶ್ರಣದೊಂದಿಗೆ ರುಬ್ಬಿದ ಮಿಶ್ರಣವನ್ನು ಬೆರೆಸಿ ಅಗತ್ಯವಿದ್ದರೆ ರುಚಿಗೆ ತಕ್ಕಷ್ಟು ಉಪ್ಪು ಬೆರೆಸಿ ಚೆನ್ನಾಗಿ ತಿರುಗಿಸಿ ತಣ್ಣಗಾಗಲು ಬಿಡಬೇಕು. ತಣ್ಣಗಾದ ಪಾಲಾಕ್ ಮಸಾಲೆಯೊಂದಿಗೆ ಅನ್ನ ಬೆರೆಸಿ ನಿಂಬೆ ರಸ ಸೇರಿಸಿ ಕಲಸಿದರೆ ರುಚಿಕರವಾದ ಪಾಲಾಕ್ ರೈಸ್ ಸವಿಯಲು ಸಿದ್ಧ.

# ಪ್ಯಾಲೆಸ್ತೀನಿಯರನ್ನು ನಡು ಬೀದಿಯಲ್ಲಿ ಗುಂಡಿಕ್ಕಿ ಕೊಂದ ಹಮಾಸ್




ಗಾಜ : ಇಸ್ರೇಲ್ ಹಾಗೂ ಹಮಾಸ್ ನಡುವಿನ ಯುದ್ಧ ಇನ್ನೂ ನಿಂತಿಲ್ಲ. ಇದೀಗ ಇಸ್ರೇಲ್‌ಗೆ ಸಹಾಯ ಮಾಡಿದ ಆರೋಪದ ಮೇಲೆ ಮೂವರು ಪ್ಯಾಲೆಸ್ತೀನಿಯನ್ನರನ್ನು ಗಾಜಾದಲ್ಲಿದ್ದ ಜನಸಮೂಹದ ಮುಂದೆ ಹಮಾಸ್ ಭಯೋತ್ಪಾದಕರು ಗುಂಡಿಕ್ಕಿ ಕೊಂದಿದ್ದಾರೆ. ಸದ್ಯ ಈ ವಿಡಿಯೋ ಸಾಮಾಜಿಕ ಜಾಲತಾಣದಲ್ಲಿ ವೈರಲ್ ಆಗಿದೆ. ಮೂವರು ಹಮಾಸ್ ಬಂದೂಕುಧಾರಿಗಳ ಮುಂದೆ ಕಣ್ಣುಮುಚ್ಚಿ ನೆಲದ ಮೇಲೆ ಮಂಡಿಯೂರಿ ಕುಳಿತಿರುವ ಮೂವರು ವ್ಯಕ್ತಿಗಳು ಕುಳಿತಿದ್ದು, ಉಗ್ರರು ಶಸ್ತ್ರಗಳನ್ನು ಹಿಡಿದು ನಿಂತಿದ್ದಾರೆ. ವ್ಯಕ್ತಿಯೊಬ್ಬ ಕಾಗದದ ತುಣುಕಿನಿಂದ ಅರೇಬಿಕ್ ಭಾಷೆಯಲ್ಲಿ ಜೋರಾಗಿ ಏನನ್ನೋ ಓದುತ್ತಿದ್ದಾನೆ.

# ಪ್ರತಿಭಟನೆಯಿಂದಾಗಿ ಬೆಂಕಿಯುಂಡೆಯಂತಾದ ಇಟಲಿ




ಇಟಲಿ : ಪ್ಯಾಲೇಸ್ತಿನ್ ಪರ ಪ್ರತಿಭಟನೆಯಿಂದಾಗಿ ಇಟಲಿ ಬೆಂಕಿಯುಂಡೆಯಂತಾಗಿದೆ. ಇಸ್ರೇಲ್ ಹಾಗೂ ಪ್ಯಾಲೇಸ್ತೀನ್ ಪರ ಹಮಾಸ್ ನಡುವಣ ಯುದ್ಧ ಆರಂಭವಾಗಿ ಎರಡು ವರ್ಷಗಳೇ ಕಳೆದಿದೆ. ಆದರೂ ಗಾಜಾದ ಮೇಲೆ ಇಸ್ರೇಲ್ ದಾಳಿ ನಿರಂತರವಾಗಿ ಮುಂದುವರೆದಿದ್ದು, ಈ ಯುದ್ಧದಿಂದಾಗಿ ಗಾಜಾದಲ್ಲಿ ಬರಗಾಲ ಉದ್ಭವಿಸಿದೆ ಮಕ್ಕಳು ದೊಡ್ಡವರೆನ್ನದೇ ಲಕ್ಷಾಂತರ ಜನ ಪ್ರಾಣ ಕಳೆದುಕೊಂಡಿದ್ದು, ಅಲ್ಲಿ ವಾಸ ಮಾಡ್ತಿದ್ದ ಲಕ್ಷಾಂತರ ಜನರ ಸ್ಥಳಾಂತರವಾಗಿದೆ ಎಂದೆಲ್ಲಾ ಜಾಗತಿಕ ಮಾಧ್ಯಮಗಳು ವರದಿ ಮಾಡಿವೆ.

# ಟ್ರಂಪ್ ಮನೆ ಬಾಗಿಲಿನಲ್ಲಿ ಪಾಕ್ ಪ್ರಧಾನಿ ಷರೀಫ್..!



ವಾಷಿಂಗ್ಟನ್ : ಪಾಕ್ ಸೇನಾ ಮುಖ್ಯಸ್ಥ ಆಸಿಮ್ ಮುನೀರ್ ಅಮೆರಿಕದ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರನ್ನು ಭೇಟಿಯಾಗಿ 100 ದಿನಗಳು ಕಳೆದಿವೆ. ಅಷ್ಟರೊಳಗೆ ಪಾಕ್ ಪ್ರಧಾನಿ ಶೆಹಬಾಜ್ ಷರೀಫ್ ಟ್ರಂಪ್ ಮನೆ ಬಾಗಿಲಿಗೆ ಬಂದಿಳಿದಿದ್ದಾರೆ. ವಿಶ್ವಸಂಸ್ಥೆಯ ಸಾಮಾನ್ಯ ಸಭೆ ನಡೆಯಲಿದ್ದು, ಟ್ರಂಪ್ ಭಾಷಣ ಮಾಡಲಿದ್ದಾರೆ. ಟ್ರಂಪ್ ತಮ್ಮ ಎರಡನೇ ಅವಧಿಯ ಮೊದಲ ಎಂಟು ತಿಂಗಳಲ್ಲಿ ಮಾಡಿದ ಐತಿಹಾಸಿಕ ಸಾಧನೆಗಳನ್ನು ಜಾಗತಿಕ ವೇದಿಕೆಯಲ್ಲಿ ಎತ್ತಿ ತೋರಿಸಲಿದ್ದಾರೆ.

# ಚಾಬಹರ್ ಬಂದರ್ ನಿರ್ಬಂಧ ರದ್ದು ಮಾಡಿದ ಅಮೆರಿಕ



ನವದೆಹಲಿ: ಮಹತ್ವದ ಬೆಳವಣಿಗೆಯೊಂದರಲ್ಲಿ ಇರಾನ್‌ನ ಚಾಬಹರ್ ಬಂದರಿಗೆ ನೀಡಿದ್ದ ನಿರ್ಬಂಧ ವಿನಾಯ್ತಿಯನ್ನು ಅಮೆರಿಕ ಸರ್ಕಾರ ರದ್ದುಪಡಿಸಿದೆ. ಇದು ಪಾಕಿಸ್ತಾನವನ್ನು ಬಳಸದೆಯೇ ಚಾಬಹರ್ ಬಂದರಿನ ಮೂಲಕ ಅಫ್ಘಾನಿಸ್ತಾನ, ಮಧ್ಯ ಏಷ್ಯಾ ದೇಶಗಳ ಜೊತೆ ವ್ಯಾಪಾರ ನಡೆಸುವ ಭಾರತಕ್ಕೆ ದೊಡ್ಡ ಪೆಟ್ಟು ನೀಡಲಿದೆ. ಈ ಬಂದರಿನ ಮೂಲಕ ಗಳಿಸುವ ಆದಾಯವನ್ನು ಇರಾನ್, ಸಮೂಹ ನಾಶಕ ಅಸ್ತ್ರಗಳಾದ ಪರಮಾಣು ಬಾಂಬ್ ಸೇರಿ ಇತರೆ ಉದ್ದೇಶಗಳಿಗೆ ಬಳಸುತ್ತಿದೆ. ಅದನ್ನು ತಡೆಯಲು ಈ ಕ್ರಮ ಎಂದು ಅಮೆರಿಕ ಹೇಳಿದ್ದರೂ, ಇದು ಭಾರತವನ್ನು ಗುರಿಯಾಗಿಸಿ ಕೈಗೊಂಡ ಎಂದೂ ವಿಶ್ಲೇಷಿಸಲಾಗುತ್ತಿದೆ.

# ಅಮೆರಿಕ ತೊರೆಯಬೇಡಿ ಎಂದ ಎಂಎನ್‌ಸಿ ಕಂಪನಿಗಳು !




ವಾಷಿಂಗ್ಟನ್: ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರ ಹೊಸ ವಲಸಿಗರ ಮೇಲಿನ ಕ್ರಮಕ್ಕೆ ಸಹಿ ಹಾಕಿದ ಬೆನ್ನಲ್ಲೇ ಇದೀಗ ಮೆಟಾ ಮತ್ತು ಮೈಕ್ರೋಸಾಫ್ಟ್‌ಗಳಂತಹ ಟೆಕ್ ದೈತ್ಯ ಕಂಪನಿಗಳು ಶನಿವಾರ ಬೆಳಗ್ಗೆ ಸಭೆ ಸೇರಿ, ತಮ್ಮ ಎಲ್ಲಾ ಹೆಚ್-1ಬಿ ವೀಸಾ (H-1B Visa) ಹೊಂದಿರುವ ಉದ್ಯೋಗಿಗಳಿಗೆ ತಕ್ಷಣಕ್ಕೆ ಅಮೆರಿಕ ತೊರೆಯದಂತೆ ಮನವಿ ಮಾಡಿಕೊಂಡಿವೆ. ವರದಿಗಳ ಪ್ರಕಾರ ಕಂಪನಿಗಳು ಪ್ರಸ್ತುತ ಅಮೆರಿಕದ ಹೊರಗೆ ವಾಸಿಸುತ್ತಿರುವ ತಮ್ಮ ಉದ್ಯೋಗಿಗಳು 24ಗಂಟೆಗಳ ಒಳಗಾಗಿ ಅಮೆರಿಕಗೆ ವಾಪಸ್ ಬರುವಂತೆ ಕೇಳಿಕೊಂಡಿವೆ.

# ಸೌದಿಅರೇಬಿಯಾ ಪಾಕಿಸ್ತಾನವನ್ನು ರಕ್ಷಿಸುತ್ತದೆ !



ಹೊಸದಿಲ್ಲಿ: ಆಪರೇಷನ್ ಸಿಂಧೂರ್ ಕಾರ್ಯಾಚರಣೆಯ ವೇಳೆ ಭಾರತದಿಂದ ಹೊಡೆತ ತಿಂದು ಯುದ್ಧ ನಿಲ್ಲಿಸುವಂತೆ ಅಂಗಲಾಚಿದ್ದ ಪಾಕಿಸ್ತಾನ ಇದೀಗ ತನ್ನ ಬೆಂಬಲಕ್ಕೆ ಇತರ ದೇಶಗಳ ನೆರವು ಪಡೆಯಲು ಹೊರಟಿರುವ ಸಂಗತಿ ಬಯಲಾಗಿದೆ. ಒಂದು ವೇಳೆ, ಭಾರತವು ಪಾಕಿಸ್ತಾನದ ಮೇಲೆ ಯುದ್ಧ ಘೋಷಿಸಿದರೆ, ಸೌದಿ ಅರೇಬಿಯಾ ಪಾಕಿಸ್ತಾನವನ್ನು ರಕ್ಷಿಸುತ್ತದೆ ಎಂದು ಪಾಕಿಸ್ತಾನದ ರಕ್ಷಣಾ ಸಚಿವ ಖವಾಜಾ ಆಸಿಫ್ ಹೇಳಿಕೊಂಡಿದ್ದಾರೆ. "ಸೌದಿ ಅರೇಬಿಯಾ ಅಥವಾ ಪಾಕಿಸ್ತಾನದ ಮೇಲೆ ಆಕ್ರಮಣವಾದರೆ, ನಾವು ಅದನ್ನು ಜಂಟಿಯಾಗಿ ರಕ್ಷಿಸುತ್ತೇವೆ," ಎಂದರು.

# ಭಾರತದ ಆರ್ಭಟಕ್ಕೆ ಬಾಂಗ್ಲಾದೇಶ ಧೂಳೀಪಟ



ದುಬೈ: ಹಾಲಿ ಚಾಂಪಿಯನ್ ಟೀಂ ಇಂಡಿಯಾ 2025ರ ಏಷ್ಯಾಕಪ್ ಟೂರ್ನಿಯಲ್ಲಿ ಮೊದಲ ತಂಡವಾಗಿ ಫೈನಲ್‌ಗೆ ಲಗ್ಗೆಯಿಟ್ಟಿದೆ. ಸೂಪರ್-4 ಹಂತದ ತನ್ನ ಪಾಲಿನ ಎರಡನೇ ಪಂದ್ಯದಲ್ಲಿ ಸೂರ್ಯಕುಮಾರ್ ಯಾದವ್ ನೇತೃತ್ವದ ಟೀಂ ಇಂಡಿಯಾ, ಬಾಂಗ್ಲಾದೇಶ ಎದುರು 41 ರನ್ ಅಂತರದ ಅನಾಯಾಸದ ಗೆಲುವು ದಾಖಲಿಸಿದೆ. ಈ ಮೂಲಕ ಇನ್ನೂ ಒಂದು ಪಂದ್ಯ ಬಾಕಿ ಇರುವಂತೆಯೇ ಏಷ್ಯಾ ಕಪ್ ಫೈನಲ್‌ಗೆ ಲಗ್ಗೆಯಿಡುವಲ್ಲಿ ಯಶಸ್ವಿಯಾಗಿದೆ. ಅಭಿಷೇಕ್ ಶರ್ಮಾ ವಿಸ್ಫೋಟಕ ಬ್ಯಾಟಿಂಗ್ ಹಾಗೂ ಬೌಲಿಂಗ್ ವಿಭಾಗದ ಸಂಘಟಿತ ಪ್ರದರ್ಶನಕ್ಕೆ ಈ ಗೆಲುವು ಲಭಿಸಿದೆ.

# ವಿಶ್ವ ಅಥ್ಲೆಟಿಕ್ಸ್: ಕೀನ್ಯಾದ ಚೆಬೆಟ್‌ಗೆ 'ಡಬಲ್' ಚಿನ್ನ



ಟೋಕಿಯೊ: ಕೀನ್ಯಾದ ಅಥ್ಲೀಟ್‌ಗಳಾದ ಇಮ್ಯಾನುವಲ್ ವಾನ್ಯೋನಿ ಮತ್ತು ಬಿಯಟ್ರಸ್ ಚೆಬೆಟ್ ಅವರು ಶನಿವಾರ ವಿಶ್ವ ಅಥ್ಲೆಟಿಕ್ಸ್ ಚಾಂಪಿಯನ್‌ಷಿಪ್‌ನಲ್ಲಿ ಕ್ರಮವಾಗಿ ಪುರುಷರ 800 ಮೀಟರ್ ಮತ್ತು ಮಹಿಳೆಯರ 5,000 ಮೀಟರ್ ಓಟದಲ್ಲಿ ಚಿನ್ನದ ಪದಕಕ್ಕೆ ಕೊರಳೊಡ್ಡಿದರು. ಕಳೆದ ವರ್ಷ ಪ್ಯಾರಿಸ್ ಒಲಿಂಪಿಕ್ಸ್‌ನಲ್ಲಿ ಇದೇ ಸ್ಪರ್ಧೆಯಲ್ಲಿ ಚಾಂಪಿಯನ್ ಆಗಿದ್ದ ಈ ಇಬ್ಬರು ಅಥ್ಲೀಟ್‌ಗಳು ಮತ್ತೊಮ್ಮೆ ವಿಶ್ವ ಮಟ್ಟದ ಸ್ಪರ್ಧೆಯಲ್ಲಿ ಪಾರಮ್ಯ ಮೆರೆದರು. ಚೆಬೆಟ್ ಅವರು ಇಲ್ಲಿ 10,000 ಮೀಟರ್ ಸ್ಪರ್ಧೆಯಲ್ಲೂ ಸ್ವರ್ಣ ಗೆದ್ದಿದ್ದಾರೆ.

# ಕನ್ನಡ ಚಿತ್ರರಂಗವನ್ನು ಬಲಿಗೊಡಲು ಸಾಧ್ಯವಿಲ್ಲ : ಸಾ.ರಾ. ಗೋವಿಂದ್



ಮಂಗಳೂರು : ಮಲ್ಟಿಪ್ಲೆಕ್ಸ್‌ಗಳಲ್ಲಿ ಸಿನಿಮಾ ಟಿಕೆಟ್ ದರವನ್ನು 200ಕ್ಕೆ ಸೀಮಿತಗೊಳಿಸಿ ರಾಜ್ಯ ಸರ್ಕಾರ ಹೊರಡಿಸಿದ್ದ ಆದೇಶಕ್ಕೆ ಕರ್ನಾಟಕ ಹೈಕೋರ್ಟ್ ತಡೆ ನೀಡಿರುವುದಕ್ಕೆ ಚಲನಚಿತ್ರ ವಾಣಿಜ್ಯ ಮಂಡಳಿಯ ಮಾಜಿ ಅಧ್ಯಕ್ಷ ಸಾ.ರಾ.ಗೋವಿಂದ್ ತೀವ್ರ ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಹೈಕೋರ್ಟ್‌ನ ಈ ನಿರ್ಧಾರದ ವಿರುದ್ಧ ಮೇಲ್ಮನವಿ ಸಲ್ಲಿಸಲಾಗುವುದು ಎಂದು ಅವರು ತಿಳಿಸಿದ್ದಾರೆ. "ಕಾಂತಾರ"ದಂತಹ ದೊಡ್ಡ ಬಜೆಟ್‌ನ ಚಿತ್ರಗಳಿಗಾಗಿ ಕನ್ನಡ ಚಿತ್ರರಂಗವನ್ನು ಬಲಿಗೊಡಲು ಸಾಧ್ಯವಿಲ್ಲ. ಮಲ್ಟಿಪ್ಲೆಕ್ಸ್ ಮಾಲೀಕರಿಗೆ ಒಂದು ನ್ಯಾಯ, ಸಾಮಾನ್ಯ ಚಿತ್ರಮಂದಿರಗಳಿಗೆ ಮತ್ತೊಂದು ನ್ಯಾಯ ಇದೆಯೇ ಎಂದು ಪ್ರಶ್ನಿಸಿದ್ದಾರೆ.

# ಸರಕಾರಿ ನೌಕರರಿಗೆ ನಗದುರಹಿತ ಚಿಕಿತ್ಸೆಗೆ 'ಆರೋಗ್ಯ ಸಂಜೀವಿನಿ' ಜಾರಿ




ಬೆಂಗಳೂರು : ರಾಜ್ಯ ಸರ್ಕಾರಿ ನೌಕರರು ಮತ್ತು ಅವರ ಕುಟುಂಬದ ಸದಸ್ಯರಿಗೆ ನಗದು ರಹಿತ ವೈದ್ಯಕೀಯ ಚಿಕಿತ್ಸೆ ಒದಗಿಸುವ ಮಹತ್ವಾಕಾಂಕ್ಷೆಯ 'ಕರ್ನಾಟಕ ಆರೋಗ್ಯ ಸಂಜೀವಿನಿ ಯೋಜನೆ' ಅಕ್ಟೋಬರ್ 1, 2025ರಿಂದ ಜಾರಿಗೆ ಬರಲಿದೆ. ಈ ಯೋಜನೆಯ ಅನುಷ್ಠಾನಕ್ಕೆ ಸಂಬಂಧಿಸಿದಂತೆ ರಾಜ್ಯ ಸರ್ಕಾರ ಹೊಸ ಮಾರ್ಗಸೂಚಿಗಳನ್ನು ಹೊರಡಿಸಿದೆ. ಸುವರ್ಣ ಆರೋಗ್ಯ ಸುರಕ್ಷಾ ಟ್ರಸ್ಟ್ ಮೂಲಕ ಅನುಷ್ಠಾನಗೊಳ್ಳಲಿರುವ ಈ ಯೋಜನೆಗೆ ಸರ್ಕಾರಿ ನೌಕರರ ವೇತನದಿಂದ ಮಾಸಿಕ ವಂತಿಕೆಯನ್ನು ಕಡಿತಗೊಳಿಸಲಾಗುವುದು. ಅಕ್ಟೋಬರ್ 2025ರ ವೇತನದಿಂದ ಈ ವಂತಿಕೆ ಕಡಿತ ಆರಂಭವಾಗಲಿದೆ.

# ರಸ್ತೆಗುಂಡಿಗಳನ್ನು ಮುಚ್ಚಲು 8000ಕೋಟಿ ರೂ.ಗಳ ಅಗತ್ಯವಿದೆ



ಬೆಂಗಳೂರು: ಬೆಂಗಳೂರಿನಲ್ಲಿ ರಸ್ತೆಗುಂಡಿಗಳನ್ನು ಮುಚ್ಚಲು ಶಾಸಕರಿಗೆ ನೀಡಲಾದ 25 ಕೋಟಿ ರೂ.ಗಳ ಅನುದಾನವನ್ನು ಬಳಕೆ ಮಾಡಿಕೊಳ್ಳುವಂತೆ ಸರ್ಕಾರ ಹೇಳಿದೆ. ಆದರೆ, ಸರ್ಕಾರ ನೀಡಿರುವ ಈ ಅನುದಾನ ಯಾವುದಕ್ಕೂ ಸಾಲುವುದಿಲ್ಲ. ಬೆಂಗಳೂರಿನ ಮಹದೇವಪುರ ವಿಧಾನಸಭಾ ಕ್ಷೇತ್ರದಲ್ಲಿ ನಿರ್ಮಾಣವಾಗಿರುವ ರಸ್ತೆಗುಂಡಿಗಳನ್ನು ಮುಚ್ಚಲು 700 ರಿಂದ 8000 ಕೋಟಿ ರೂ.ಗಳ ಅನುದಾನದ ಅಗತ್ಯವಿದೆ ಎಂದು ಬಿಜೆಪಿ ಶಾಸಕಿ ಮಂಜುಳಾ ಲಿಂಬಾವಳಿ ಹೇಳಿದ್ದಾರೆ. ಮಹದೇವಪುರದಲ್ಲಿ ಟ್ರಾಫಿಕ್ ದಟ್ಟಣೆ ಮತ್ತು ಹಾಳಾಗುತ್ತಿರುವ ರಸ್ತೆಗಳು ನಿಜವಾದ ಸಮಸ್ಯೆಗಳಾಗಿವೆ ಎಂದು ಶಾಸಕಿ ಆರೋಪಿಸಿದರು.

# ರಾಜ್ಯದಲ್ಲಿ 'ಪೊಲೀಸ್ ನೇಮಕಾತಿ'ಗೆ ವಯೋಮಿತಿ 2 ವರ್ಷ ಸಡಿಲಿಕೆ



ಬೆಂಗಳೂರು : ರಾಜ್ಯ ಪೊಲೀಸ್ ಇಲಾಖೆಯಲ್ಲಿ ಖಾಲಿ ಇರುವ ವಿವಿಧ ವೃಂದದ ನೇಮಕಾತಿ ಪ್ರಕ್ರಿಯೆಗೆ ಗರಿಷ್ಠ ವಯೋಮಿತಿಯಲ್ಲಿ 2 ವರ್ಷ ಸಡಿಲಿಸಿ ಇಲಾಖೆ ಆದೇಶ ಹೊರಡಿಸಿದೆ. ಈ ಕುರಿತಂತೆ ರಾಜ್ಯ ಸರ್ಕಾರದಿಂದ ಆದೇಶ ಹೊರಡಿಸಲಾಗಿದ್ದು, ದಿನಾಂಕ: 06.9.2025ರಲ್ಲಿ ಸರ್ಕಾರದ ಆದೇಶ ದಿನಾಂಕ:31.12.2027ರವರೆಗೆ ನೇರ ನೇಮಕಾತಿಗಾಗಿ ಅರ್ಜಿಗಳನ್ನು ಆಹ್ವಾನಿಸಿ ಹೊರಡಿಸುವ ಅಧಿಸೂಚನೆಗಳನ್ವಯ ಆಯ್ಕೆ ಪ್ರಕ್ರಿಯೆಯಲ್ಲಿ ಭಾಗವಹಿಸುವ ಎಲ್ಲಾ ಪವರ್ಗಗಳ ಅಭ್ಯರ್ಥಿಗಳಿಗೆ ನಿಗಧಿಪಡಿಸಿರುವ ಗರಿಷ್ಠ ವಯೋಮಿತಿಯಲ್ಲಿ ಒಂದು ಬಾರಿಯ ಕ್ರಮವಾಗಿ 02 ವರ್ಷಗಳ ಸಡಿಲಿಕೆ ನೀಡಿದೆ ಎಂದು ತಿಳಿಸಿದೆ.

# ಒಲಂಪಿಕ್ಸ್ ಪದಕ ವಿಜೇತರಿಗೆ ಸರ್ಕಾರ 6 ಕೋಟಿ ರೂ. ನಗದು ಬಹುಮಾನ!



ಮೈಸೂರು,: ಮುಂದಿನ ಒಲಂಪಿಕ್ಸ್ ಪದಕ ವಿಜೇತರಿಗೆ ಕರ್ನಾಟಕ ಸರ್ಕಾರ 6 ಕೋಟಿ ರೂ. ನಗದು ಬಹುಮಾನ ನೀಡಲಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು. ಸರ್ಕಾರ ಕ್ರೀಡಾಪಟುಗಳಿಗೆ ಎಲ್ಲ ರೀತಿಯ ಸಹಕಾರವನ್ನು ನೀಡುತ್ತಿದೆ. ಮುಂದಿನ ಒಲಿಂಪಿಕ್ಸ್ ತರಬೇತಿ ಪಡೆಯಲು ರಾಜ್ಯದ 60 ಅತ್ಯಂತ ಪ್ರತಿಭಾನ್ವಿತ ಕ್ರೀಡಾಪಟುಗಳಿಗೆ ವಾರ್ಷಿಕ ತಲಾ ರೂ 10.00 ಲಕ್ಷ ಸಹಾಯ ಧನ ನೀಡಿ ತರಬೇತಿ ನೀಡಲಾಗುವುದು. ಕ್ರೀಡಾಪಟುಗಳಿಗೆ ಸರ್ಕಾರಿ ಉದ್ಯೋಗ ಒದಗಿಸಲು ಎಲ್ಲ ಇಲಾಖೆಗಳಲ್ಲಿ ಶೇಕಡಾ 2ರಷ್ಟು ಮೀಸಲಾತಿಯನ್ನೂ, ಹಾಗೂ ಪೊಲೀಸ್ ಇಲಾಖೆಯಲ್ಲಿ 2ರಿಂದ ಶೇಕಡಾ 3ರಷ್ಟು ಕ್ರೀಡಾಮೀ ಸಲಾತಿಯನ್ನು ನೀಡಲಾಗುತ್ತಿದೆ ಎಂದರು.

# ಮಕ್ಕಳಿಗೆ ಎಲ್ಲಾ ಕೊಟ್ರೂ ಶಾಲೆಗೆ ಮಕ್ಕಳು ಬರಲ್ಲ ಅಂದ್ರೆ ಹೇಗೆ : ಕೃಷ್ಣ ಬೈರೇಗೌಡ




ಹಾಸನ : ಖಾಸಗಿ ಶಾಲೆಯವ್ರು ಕೊಡೋದು 15,000 ಸಂಬಳ. ಆದರೆ ಸರ್ಕಾರ ಶಿಕ್ಷಕರಿಗೆ 50ರಿಂದ 70 ಸಾವಿರ ಸಂಬಳ ಕೊಡುತ್ತೆ. ಮಕ್ಕಳಿಗೆ ಊಟ, ಹಾಲು ಮೊಟ್ಟೆ, ಬ್ಯಾಗು, ಬಟ್ಟೆ, ಬುಕ್ ಕೊಟ್ರೂ ಶಾಲೆಗೆ ಮಕ್ಕಳು ಬರಲ್ಲ ಅಂದ್ರೆ ಹೇಗೆ ? ಶಿಕ್ಷಣಾಧಿಕಾರಿಗಳು ಏನ್ ಮಾಡ್ತಾ ಇದೀರಾ ? ಎಂದು ಹಾಸನ ಜಿಲ್ಲೆ ಕ್ಷೇತ್ರ ಶಿಕ್ಷಣಾಧಿಕಾರಿ ವಿರುದ್ಧ ಸಚಿವ ಕೃಷ್ಣ ಬೈರೇಗೌಡ ಅವರು ಗರಂ ಆಗಿದ್ದಾರೆ. ಸರ್ಕಾರಕ್ಕೆ ಹಣ ಎಲ್ಲಿಂದ ಬರುತ್ತೆ. ಸರ್ಕಾರ ಹಣದ ಪ್ರಿಂಟಿಂಗ್ ಮೆಷಿನ್ ಇಟ್ಟಿಲ್ಲ. ಬಡ ಜನರ ತೆರಿಗೆ ಹಣ ಹೋದ್ರೆ ಹೋಗ್ಲಿ ಮಜಾ ಮಾಡೋಣ ಎಂಬ ಭಾವನೆ ಬಿಡಿ ಎಂದು ಅವರು ಹೇಳಿದರು.

# ರಸ್ತೆ ಗುಂಡಿ ಮುಚ್ಚಿಸಲು ನಿಮಗೇನು ಕಷ್ಟ: ಸಿಎಂ ಗುಡುಗು



ಬೆಂಗಳೂರು : ಬೆಂಗಳೂರಿನ ರಸ್ತೆ ಗುಂಡಿ ವಿಚಾರ ಇದೀಗ ದೇಶ ಮಟ್ಟದಲ್ಲಿ ಚರ್ಚೆಗೆ ಗ್ರಾಸವಾಗಿದೆ. ಉದ್ಯಮಿಗಳ ಆಕ್ರೋಶದ ನಂತರ ಈ ವಿಚಾರವಾಗಿ ಸರ್ಕಾರ ಕೂಡ ಗಂಭೀರವಾಗಿ ಗಮನ ಹರಿಸಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದಲ್ಲಿ ಗೃಹ ಕಚೇರಿ ಕೃಷ್ಣಾದಲ್ಲಿ ಗ್ರೇಟರ್ ಬೆಂಗಳೂರು ಪ್ರಾಧಿಕಾರದ ಅಧಿಕಾರಿಗಳ ಸಭೆ ನಡೆಯಿತು. ಸಭೆಯಲ್ಲಿ, ರಸ್ತೆ ಗುಂಡಿಗಳ ವಿಚಾರವಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅಧಿಕಾರಿಗಳನ್ನು ತೀವ್ರವಾಗಿ ತರಾಟೆಗೆ ತೆಗೆದುಕೊಂಡರು. ಅಲ್ಲದೆ, ಚೀಫ್ ಎಂಜಿನಿಯರ್‌ಗಳನ್ನು ಅಮಾನತು ಮಾಡಬೇಕಾಗುತ್ತದೆ ಎಂದು ಗಂಭೀರ ಎಚ್ಚರಿಕೆಯನ್ನೂ ನೀಡಿದರು.

# ರಾಜ್ಯವಾರು ಆದಾಯದಲ್ಲಿ ಉತ್ತರಪ್ರದೇಶ ನಂ. 1



ಹೊಸದಿಲ್ಲಿ: ರಾಜ್ಯಗಳ ಹಣಕಾಸು ಸ್ಥಿತಿಗತಿ ಕುರಿತು ಇದೇ ಮೊದಲ ಬಾರಿಗೆ ಮಹಾಲೇಖಪಾಲರು ಸಿದ್ಧಪಡಿಸಿದ ವರದಿ ಬಿಡುಗಡೆಯಾಗಿದ್ದು, 2022- 23ರಲ್ಲಿ ದೇಶದ ಒಟ್ಟು 16 ರಾಜ್ಯಗಳು ವೆಚ್ಚಕ್ಕಿಂತ ಹೆಚ್ಚುವರಿ ಆದಾಯ ಹೊಂದಿವೆ ಎಂಬ ವಿಷಯವನ್ನು ಬಹಿರಂಗಪಡಿಸಿದೆ. ಈ ಅವಧಿಯಲ್ಲಿ 12 ರಾಜ್ಯಗಳು ಆದಾಯ ಕೊರತೆ ಎದುರಿಸಿವೆ. ಹೆಚ್ಚುವರಿ ಆದಾಯ ಗಳಿಸಿದ ರಾಜ್ಯಗಳ ಪೈಕಿ ಕರ್ನಾಟಕ 5ನೇ ಸ್ಥಾನದಲ್ಲಿದೆ. 2022-23ರಲ್ಲಿ ಕರ್ನಾಟಕವು ಒಟ್ಟು ವೆಚ್ಚಕ್ಕಿಂತ ಹೆಚ್ಚುವರಿ 13,496 ಕೋರೂ. ಆದಾಯ ಪಡೆದಿದೆ. 37,000 ಕೋಟಿ ರೂ. ಆದಾಯ ಗಳಿಸಿ 16 ರಾಜ್ಯಗಳ ಪೈಕಿ ಉತ್ತರಪ್ರದೇಶ ಮೊದಲ ಸ್ಥಾನದಲ್ಲಿದೆ.

# 28 ರಾಜ್ಯಗಳಿಂದ ಒಟ್ಟು ಸಾಲ 59.60 ಲಕ್ಷ ಕೋಟಿ ರೂ!




ನವದೆಹಲಿ : ಭಾರತದಲ್ಲಿ ಸಾಲಗಳು ಬೆಟ್ಟಗಳಂತೆ ಬೆಳೆಯುತ್ತಿವೆ. ಮಹಾಲೇಖಪಾಲರ ವರದಿಯೊಂದರ ಪ್ರಕಾರ, ಭಾರತದ ವಿವಿಧ ರಾಜ್ಯಗಳು ಮಾಡಿರುವ ಸಾಲ ಒಂದು ದಶಕದಲ್ಲಿ ಮೂರು ಪಟ್ಟು ಹೆಚ್ಚಿದೆ. 2022-23ರಲ್ಲಿ 28 ರಾಜ್ಯಗಳಿಂದ ಒಟ್ಟು ಆಗಿರುವ ಸಾಲ 59.60 ಲಕ್ಷ ಕೋಟಿ ರೂ ಎನ್ನಲಾಗಿದೆ. 2013-14ರಲ್ಲಿ ರಾಜ್ಯಗಳ ಒಟ್ಟು ಸಾಲ 17.57 ಲಕ್ಷ ಕೋಟಿ ರೂ ಮಾತ್ರವೇ ಇತ್ತು. ಹತ್ತು ವರ್ಷದಲ್ಲಿ 3.3 ಪಟ್ಟು ಸಾಲ ಹೆಚ್ಚಳ ಆಗಿದೆ. ಭಾರತದ ಒಟ್ಟು ಜಿಡಿಪಿಯ ಶೇ. 22.17ರಷ್ಟು ಸಾಲವನ್ನು ರಾಜ್ಯಗಳು ಹೊಂದಿವೆ. ಸಿಎಜಿ ವಿಶ್ಲೇಷಣಾತ್ಮಕ ದತ್ತಾಂಶ ಆಧರಿಸಿ ರಾಷ್ಟ್ರೀಯ ಮಾಧ್ಯಮ ವರದಿ ಮಾಡಿ ಈ ಮಾಹಿತಿ ಪ್ರಸ್ತುತಪಡಿಸಿದೆ.

# ಭಾರತೀಯ ಸೇನೆಯಿಂದ 'ಅಮೋಘ್ ಫ್ಯೂರಿ' ಕಾರ್ಯಾಚರಣೆ




ಜೈಪುರ : ರಾಜಸ್ಥಾನದ ಥಾರ್ ಮರುಭೂಮಿಯಲ್ಲಿರುವ ಮಹಾಜನ್ ಫೀಲ್ಡ್ ಫೈರಿಂಗ್ ರೇಂಜ್ (MFFR)ನಲ್ಲಿ ಸಪ್ತ ಶಕ್ತಿ ಕಮಾಂಡ್ 'ಅಮೋಘ್ ಫ್ಯೂರಿ' ಎಂಬ ಸಂಯೋಜಿತ ಫೈರ್‌ಪವರ್ ಪ್ರದರ್ಶನವನ್ನು ಯಶಸ್ವಿಯಾಗಿ ನಡೆಸಿತು. ಈ ಕಾರ್ಯಾಚರಣೆಯು ಭಾರತೀಯ ಸೇನೆಯ ಯುದ್ಧ ಸಾಮರ್ಥ್ಯ, ಸಮನ್ವಯ ಮತ್ತು ಕಾರ್ಯಾಚರಣೆಯ ಸನ್ನದ್ಧತೆಯ ನೇರ ಪ್ರದರ್ಶನವಾಗಿತ್ತು ಎಂದು ಲೆಫ್ಟಿನೆಂಟ್ ಕರ್ನಲ್ ನಿಖಿಲ್ ಧವನ್ ಹೇಳಿದ್ದಾರೆ. ಈ ಹೆಚ್ಚಿನ ತೀವ್ರತೆಯ ಫೈರ್‌ಪವರ್ ಕಾರ್ಯಾಚರಣೆಯಲ್ಲಿ ಭಾರತೀಯ ಸೇನೆಯು ಬಹು-ಪ್ರದೇಶ ಯುದ್ಧ ಸನ್ನಿವೇಶಕ್ಕೆ ತಕ್ಕಂತೆ ತನ್ನ ಸಿದ್ಧತೆ ಪ್ರದರ್ಶಿಸಿದೆ ಎಂದು ಹೇಳಿದ್ದಾರೆ.

# ಯುದ್ಧ ಆರಂಭ, ಮುಕ್ತಾಯ ಎರಡನ್ನೂ ನಿರ್ಧರಿಸುವವರು ನಾವೇ-ಚೀಫ್ ಮಾರ್ಷಲ್



ಹೊಸದಿಲ್ಲಿ: "ಯುದ್ಧವನ್ನು ಹೇಗೆ ಆರಂಭಿಸಬೇಕು ಮತ್ತು ಅದನ್ನು ಯಾವ ರೀತಿ ಕ್ಷಿಪ್ರಗತಿಯಲ್ಲಿ ಕೊನೆಗಾಣಿಸಬೇಕು ಎಂಬುದನ್ನು ಭಾರತವನ್ನು ನೋಡಿ ಜಗತ್ತು ಪಾಠ ಕಲಿಯಬೇಕು," ಎಂದು ವಾಯುಪಡೆ ಮುಖ್ಯಸ್ಥ ಏರ್ ಚೀಫ್ ಮಾರ್ಷಲ್ ಎ.ಪಿ.ಸಿಂಗ್ ಹೇಳಿ ದ್ದಾರೆ. 'ಆಪರೇಷನ್ ಸಿಂಧೂರ' ಸೇನಾ ಕಾರ್ಯಾಚರಣೆಯ ಉದಾಹರಣೆ ಕೊಟ್ಟ ಸಿಂಗ್, "ಯುದ್ಧ ಆರಂಭಿಸುವುದು ಸುಲಭ. ಆದರೆ, ಅಂತ್ಯಗೊಳಿಸುವುದು ಕಷ್ಟಸಾಧ್ಯ ಎಂಬುದನ್ನು ಭಾರತ ಸುಳ್ಳು ಮಾಡಿದೆ. ಯುದ್ಧ ಆರಂಭಿಸಿ ಬೇಗ ಸಂಘರ್ಷ ಅಂತ್ಯಗೊಳಿಸು ವುದು ಹೇಗೆ ಎಂಬ ಕುರಿತು ವಿಶ್ವ ಸಮುದಾಯ ಭಾರತದಿಂದ ಪಾಠ ಕಲಿಯಬೇಕು," ಎಂದರು.

# ಕಾಶ್ಮೀರ ನಮ್ಮದಾಗುತ್ತದೆ ಆಕ್ರಮಣ ಅಗತ್ಯವಿಲ್ಲ-ರಕ್ಷಣಾ ಸಚಿವ



ಮೊರಾಕೊ – ಪಾಕಿಸ್ತಾನ ಆಕ್ರಮಿತ ಕಾಶ್ಮೀರ ತಾನಾಗಿಯೇ ನಮ್ಮದಾಗುತ್ತದೆ. ಅಲ್ಲಿ ಬೇಡಿಕೆಗಳು ಹೆಚ್ಚಾಗುತ್ತಿವೆ; ನೀವು ಘೋಷಣೆಗಳನ್ನು ಕೇಳಿರಬಹುದು. ಐದು ವರ್ಷಗಳ ಹಿಂದೆ ನಾನು ಕಾಶ್ಮೀರ ಕಣಿವೆಯ ಒಂದು ಕಾರ್ಯ ಕ್ರಮದಲ್ಲಿ ಭಾರತೀಯ ಸೇನೆಯನ್ನು ಉದ್ದೇಶಿಸಿ ಮಾತ ನಾಡುತ್ತಿದ್ದಾಗ, ನಮಗೆ ಪಾಕಿಸ್ತಾನ ಆಕ್ರಮಿತ ಕಾಶ್ಮೀರದ ಮೇಲೆ ಆಕ್ರಮಣ ಮಾಡಿ ಅದನ್ನು ವಶಪಡಿಸಿಕೊಳ್ಳುವ ಅಗತ್ಯ ಇಲ್ಲ ಎಂದು ಹೇಳಿದ್ದೆ.




## "ಮಾರುತ" ನಮ್ಮಮ್ಮ ಸವದತ್ತಿ ಎಲ್ಲಮ್ಮ ಹಾಡು ಅನಾವರಣ..

ಹೆಸರಾಂತ ನಿರ್ದೇಶಕ ಡಾ॥ಎಸ್ ನಾರಾಯಣ್ ನಿರ್ದೇಶನದ, ದುನಿಯಾ ವಿಜಯ್ ಹಾಗೂ ಶ್ರೇಯಸ್ ಮಂಜು ಪ್ರಮುಖ ಪಾತ್ರದ ಲ್ಲಿ ನಟಿಸಿರುವ ಮತ್ತು ಕೆ.ಮಂಜು – ರಮೇಶ್ ಯಾದವ್ ಈಶಾ ಪ್ರೊಡಕ್ಷನ್ಸ್ ಲಾಂಛನದಲ್ಲಿ ನಿರ್ಮಿಸಿರುವ ಬಹು ನಿರೀಕ್ಷಿತ ಚಿತ್ರ "ಮಾರುತ" ಚಿತ್ರಕ್ಕಾಗಿ ಎಸ್ ನಾರಾಯಣ್ ಅವರೆ ಬರೆದು ಸಂಗೀತ ಸಂಯೋಜಿಸಿರುವ "ನಮ್ಮಮ್ಮ ಸವದತ್ತಿ ಎಲ್ಲಮ್ಮ" ಎಂಬ ಹಾಡು ನವರಾತ್ರಿಯ ಸಂದರ್ಭದಲ್ಲಿ ಜಂಕಾರ್ ಮ್ಯೂಸಿಕ್ ಯೂಟ್ಯೂಬ್ ಚಾನಲ್ ಮೂಲಕ ಬಿಡುಗಡೆಯಾಯಿತು. ಅನನ್ಯ ಭಟ್ ಅವರ ಗಾಯನದಲ್ಲಿ ಮೂಡಿ ಬಂದಿರುವ ಈ ಹಾಡಿನಲ್ಲಿ ನಾಯಕಿ ಬೃಂದಾ ಆಚಾರ್ಯ ಅಭಿನಯಿಸಿದ್ದಾರೆ. ಹಾಡು ಬಿಡುಗಡೆ ನಂತರ ಚಿತ್ರತಂಡದ ಸದಸ್ಯರು ಮಾತನಾಡಿದರು.




## "ಕಾಂತಾರ" ಬುಕ್ಕಿಂಗ್ ಆರಂಭ..

ಆರಂಭದಿಂದಲೂ ಸಾಕಷ್ಟು ಕುತೂಹಲ ಮೂಡಿಸಿರುವ, ಹೊಂಬಾಳೆ ಫಿಲಂಸ್ ಲಾಂಛನದಲ್ಲಿ ವಿಜಯ್ ಕಿರಗಂದೂರ್ ಅವರು ನಿರ್ಮಿಸಿರುವ ಹಾಗೂ ರಿಷಬ್ ಶೆಟ್ಟಿ ಅವರ ನಟನೆ ಹಾಗೂ ನಿರ್ದೇಶನದ, ವಿಶ್ವವೇ ಎದುರು ನೋಡುತ್ತಿರುವ, ಬಹು ನಿರೀಕ್ಷಿತ "ಕಾಂತಾರ ಅಧ್ಯಾಯ 1" ಚಿತ್ರದ ಬುಕ್ಕಿಂಗ್ ಸೆಪ್ಟೆಂಬರ್ 26 ರ ಶುಕ್ರವಾರ ಮಧ್ಯಾಹ್ನ 12.29 ಕ್ಕೆ ಕರ್ನಾಟಕದಾದ್ಯಂತ ಆರಂಭವಾಗಲಿದೆ ಎಂದು ಹೊಂಬಾಳೆ ಫಿಲಂಸ್ ಸಂಸ್ಥೆ ಮಾಹಿತಿ ನೀಡಿದೆ. "ಕಾಂತಾರ ಅಧ್ಯಾಯ 1" ಚಿತ್ರವು ಅಕ್ಟೋಬರ್ 2 ರಂದು ಭಾರತದಾದ್ಯಂತ 7000 ಕ್ಕೂ ಅಧಿಕ ಸ್ಕ್ರೀನ್‌ಗಳಲ್ಲಿ ಕನ್ನಡ ಸೇರಿದಂತೆ ಸಪ್ತ ಭಾಷೆಗಳಲ್ಲಿ ಭಾರತ ಹಾಗೂ ಭಾರತದಾಚೆಗೂ ಅದ್ದೂರಿಯಾಗಿ ಬಿಡುಗಡೆಯಾಗಲಿದೆ.




## ಪ್ರದೀಪ್ ವರ್ಮ ನಿರ್ದೇಶನದ ಮೂರನೇ ಚಿತ್ರ "ಪ್ರೇಮಿ"

ಕನ್ನಡದಲ್ಲಿ ಪ್ರೇಮ ಕಥೆಯುಳ್ಳ ಚಿತ್ರಗಳು ಸಾಕಷ್ಟು ಬಂದಿದೆ. ಆದರೆ, ವಿಭಿನ್ನ ಪ್ರೇಮ ಕಥಾಹಂದರ ಹೊಂದಿರುವ ಪ್ರೇಮ ಕಥಾನಕ ವೊಂದು ಈಗ ನಿರ್ಮಾಣವಾಗುತ್ತಿದೆ. ಶ್ರೀಗುರು ಕಾಲಭೈರವೇಶ್ವರ ಪ್ರೊಡಕ್ಷನ್ ಲಾಂಛನದಲ್ಲಿ ಬಿ.ಸಿದ್ದಲಿಂಗಯ್ಯ ಅವರು ನಿರ್ಮಿಸುತ್ತಿರುವ ಹಾಗೂ ಎಸ್ ಪ್ರದೀಪ್ ವರ್ಮ ಅವರು ನಿರ್ದೇಶಿಸುತ್ತಿರುವ ಈ ಚಿತ್ರಕ್ಕೆ "ಪ್ರೇಮಿ" ಎಂದು ಹೆಸರಿಡಲಾಗಿದೆ. ಇತ್ತೀಚೆಗೆ ನಿರ್ಮಾಪಕ ಸುರೇಶ್ ಗೌಡ ಅವರು ಈ ಚಿತ್ರದ ಶೀರ್ಷಿಕೆ ಅನಾವರಣ ಮಾಡಿ ಚಿತ್ರ ತಂಡಕ್ಕೆ ಶುಭ ಕೋರಿದ್ದಾರೆ. "ಪ್ರೇಮಿ" ಚಿತ್ರಕ್ಕೆ ಈಗಾಗಲೇ ಚಿತ್ರೀಕರಣ ಮುಕ್ತಾಯವಾಗಿದೆ. ಮಾತಿನ ಜೋಡಣೆ ನಡೆಯುತ್ತಿದೆ. ದಾವಣಗೆರೆ, ದೇವರಬೆಳಕೆರೆ, ಗೋಕರ್ಣ, ಕನಕಪುರ, ಚಿಕ್ಕಮಗಳೂರು ಹಾಗೂ ಬೆಂಗಳೂರಿನಲ್ಲಿ ಚಿತ್ರೀಕರಣ ನಡೆದಿದೆ. ಜ್ಯೋತಿಷ್ಯದ ಮೂಲಕ ಪ್ರೀತಿಯನ್ನು ಹುಡುಕುವ ವಿಭಿನ್ನ ಕಥಾಹಂದರ ಹೊಂದಿರುವ ಈ "ಪ್ರೇಮಿ" ಚಿತ್ರಕ್ಕೆ ಟಿ.ಎಸ್ ಅಕ್ಕಮಹಾದೇವಿ ಕಥೆ ಬರೆದಿದ್ದಾರೆ. ಎಸ್ ಪ್ರದೀಪ್ ವರ್ಮ ನಿರ್ದೇಶನ ಮಾಡಿದ್ದಾರೆ.




## ಸೆನ್ಸಾರ್ ಪಾಸಾದ 'ಚೌಕಿದಾರ್'ಗೆ ಸಿಕ್ತು ಯು/ಎ ಸರ್ಟಿಫಿಕೇಟ್..

ಪೃಥ್ವಿ ಅಂಬಾರ್ ಹಾಗೂ ಧನ್ಯಾ ರಾಮ್‌ಕುಮಾರ್ ಅಭಿನಯದ ಬಹುನಿರೀಕ್ಷಿತ 'ಚೌಕಿದಾರ್' ಸಿನಿಮಾ ಸೆನ್ಸಾರ್ ಪಾಸಾಗಿದೆ. ಫ್ಯಾಮಿಲಿ ಡ್ರಾಮಾ ಕಥಾಹಂದರ ಹೊಂದಿರುವ ಈ ಚಿತ್ರವನ್ನು ಸೆನ್ಸಾರ್ ಮಂಡಳಿ ಸದಸ್ಯರು ಮುಕ್ತಕಂಠದಿಂದ ಶ್ಲಾಘಿಸಿದ್ದಾರೆ. ಅದರಲ್ಲಿಯೂ ಹಿರಿಯ ನಟ ಸಾಯಿ ಕುಮಾರ್ ಅವರ ಅಭಿನಯವನ್ನು ಕೊಂಡಾಡಿದ್ದಾರೆ. ಮನಸ್ಸಿಗೆ ಹತ್ತಿರ ಎನಿಸುವ ಪಾತ್ರದಲ್ಲಿ ಸಾಯಿ ಕುಮಾರ್ ಅಮೋಘವಾಗಿ ನಟಿಸಿದ್ದಾರೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ. ರಥಾವರ ಸಿನಿಮಾ ಖ್ಯಾತಿಯ ಚಂದ್ರಶೇಖರ್ ಬಂಡಿಯಪ್ಪ ನಿರ್ದೇಶನದಲ್ಲಿ ಚೌಕಿದಾರ್ ಚಿತ್ರ ಮೂಡಿ ಬಂದಿದೆ. ಅವರ ಕಥೆಗೆ ಕಲ್ಲಹಳ್ಳಿ ಚಂದ್ರಶೇಖರ್ ಹಣ ಹಾಕಿದ್ದು, ವಿದ್ಯಾದೇವಿ ನಿರ್ಮಾಣದಲ್ಲಿ ಸಾಥ್ ಕೊಟ್ಟಿದ್ದಾರೆ. ಈಗಾಗಲೇ ಹಾಡು, ಟೀಸರ್ ಮೂಲಕ ಕುತೂಹಲ ಹೆಚ್ಚಿಸಿರುವ ಸಿನಿಮಾದಲ್ಲಿ ದೊಡ್ಡ ತಾರಾಬಳಗವಿದೆ. ಪೃಥ್ವಿ ನಾಯಕನಾಗಿ ಹಾಗೂ ಧನ್ಯ ನಾಯಕಿಯಾಗಿ ನಟಿಸಿರುವ ಚೌಕಿದಾರ್ ಸಿನಿಮಾದಲ್ಲಿ ಚಿತ್ರರಂಗದಲ್ಲಿ 50 ವರ್ಷ ಪೂರೈಸಿರುವ ಹಿರಿಯ ನಟ ಸಾಯಿ ಕುಮಾರ್ ಅವರು ವಿಶೇಷ ಪಾತ್ರದಲ್ಲಿ ನಟಿಸಿದ್ದಾರೆ. ಚೈತ್ರದ ಪ್ರೇಮಾಂಜಲಿ ಚಿತ್ರದ ನಾಯಕಿ ಶ್ವೇತಾ, ಸುಧಾರಾಣಿ ಪ್ರಮುಖ ಪಾತ್ರಗಳಿಗೆ ಜೀವ ತುಂಬಿದ್ದಾರೆ.












KARAVALI THARANGINI Weekly Owned, Editor, Published & Printed by Lalithasri Preetham Rai No.2-64/54(12), Pushparaj Nilaya, Jayanagara, 3rd 'A' Maroli Village, Dakshina Kannada, Karnataka - 575005.
email: karavalitharangini@gmail.com, web: karavalitharangini.com ph: 9880109212 Printed at Bhima Samskruthi Printers & Publishers, No 1182 14th Main Road Prakash Nagar, Bengaluru Karnataka-560021